**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಚಿಂತಾಮಣಿ.**

**ಸಿ.ಸಿ.ನಂ.1620/2026**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ನಾರಾಯಣಸ್ವಾಮಿ** | | |
| **ಗಂಡಃತಂದೆಃಹೆಸರು** | **ಸುಬ್ಬಣ್ಣ** | **ಪಿಡಬ್ಲೂಃ** | 2 |
| **ವಯಸ್ಸು** | 65 | **ಸಿಡಬ್ಲೂಃ** | 3 |
| **ಉದ್ಯೋಗಃ** | **ವ್ಯವಸಾಯ** | | |
| **ವಾಸ ಸ್ಥಳಃ** | **ಮುನಗನಹಳ್ಳಿ ಗ್ರಾಮ.** | | |

**ದಿನಾಂಕ 03-09-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದಃ-**

ಚಾ.ಸಾ.1 ಮತ್ತು 3 ರವರು ನನ್ನ ಬಾಮೈದ. ಚಾ.ಸಾ.4 ನನ್ನ ಮಾವ. ಆರೋಪಿ ನನಗೆ ಗೊತ್ತು. ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ. ನನ್ನ ಮತ್ತು ಆರೋಪಿತನ ನಡುವೆ ಗಲಾಟೆ ನಡೆದಿಲ್ಲ. ಚಾಸಾ 1 ರವರ ಜಮೀನಿನಲ್ಲಿ ಅಕ್ರಮ ಪ್ರವೇಶ ಮಾಡಿಲ್ಲ. ಆರೋಪಿತನು ಕೋಲಿನಿಂದ, ಬ್ಲೇಡಿನಿಂದ ಮತ್ತು ಕೈಗಳಿಂದ , ಕಾಲುಗಳಿಂದ ಹೊಡೆದಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಪ್ರಾಣಬೆದರಿಕೆಯನ್ನು ಹಾಕಿಲ್ಲ. ನಾನು ಜಮೀನಿನಲ್ಲಿ ಕೆಲಸ ಮಾಡುವಾಗ ಆಯಾ ತಪ್ಪಿ ಬಿದ್ದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವಾಗ ಚಿಂತಾಮಣಿ ಪೋಲೀಸರು ಬಂದು ಕೆಲವು ದಾಖಲೆಗಳನ್ನು ಸಹಿಯನ್ನು ಪಡೆದಿರುತ್ತಾರೆ.

ಪೋಲಿಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿಲ್ಲ.

ನ್ಯಾಯಾಲಯದ ಮುಂದಿರುವ ಕೋಲು ಮತ್ತು ಬ್ಲೇಡನ್ನು ನೋಡಿದರೆ ಗುರುತಿಸಲಾಗುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ ಸ ಅ ರವರಿಂದಃ–**

ದಿ. 07.03.2014 ರಂದು ಬೆಳಿಗ್ಗೆ 08.30 ಗಂಟೆ ಸಮಯದಲ್ಲಿ ಮುನಗನಹಳ್ಳಿ ಗ್ರಾಮದ ಚಾಸಾ 1 ರವರ ಜಮೀನಿನ ಸರ್ವೆ ನಂ. 106 ರಲ್ಲಿ ಚಾಸಾ 1 ರವರು ಹಿಪ್ಪು ನೇರಳೆ ಸೊಪ್ಪನ್ನು ಕಟಾವು ಮಾಡುತ್ತಿದ್ದು , ಆರೋಪಿಗಳು ಜಮೀನಿನೊಳಗೆ ಅಕ್ರಮ ಪ್ರವೇಶ ಮಾಡಿದರು ಎಂದರೆ ಸರಿಯಲ್ಲ. ಆರೋಪಿತರು ಸದರಿ ಜಮೀನು ತಮ್ಮದು ಎಂದು ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ಸರಿಯಲ್ಲ. 1 ನೇ ಆರೋಪಿ ಬ್ಲೇಡಿನಿಂದ ಚಾಸಾ 1 ರವರ ಬಲಗೈಗೆ ಹೊಡೆದು ಸಾಧಾರಣ ರಕ್ತ ಗಾಯ ಮಾಡಿ ಕಾಲಿನಿಂದ ಸೊಂಟಕ್ಕೆ ಎದೆ ಭಾಗಕ್ಕೆ ಹೊಡೆದನು ಎಂದರೆ ಸರಿಯಲ್ಲ. ಜಗಳ ಬಿಡಿಸಲು ಅಡ್ಡ ಬಂದ ಚಾಸಾ 2 ರವರಿಗೆ ಕೈಗಳಿಂದ ಹೊಡೆದು ಕೋಲಿನಿಂದ ಎಡಗೈಗೆ ಮತ್ತು ಬಲಗಾಲಿಗೆ ಹೊಡೆದು ನೋವುಂಟು ಮಾಡಿದನು ಎಂದರೆ ಸರಿಯಲ್ಲ. ಜಗಳ ಬಿಡಿಸಲು ಅಡ್ಡ ಬಂದ ನನಗೆ 1 ನೇ ಆರೋಪಿ ಕೋಲಿನಿಂದ ಬಲಗಾಲಿಗೆ ಹೊಡೆದು ನೋವುಂಟು ಮಾಡಿದನು ಎಂದರೆ ಸರಿಯಲ್ಲ. ಆಗ ಅಡ್ಡ ಹೋದ ಚಾಸಾ 4 ರವರಿಗೆ 2 ನೇ ಆರೋಪಿ ಕೈಗಳಿಂದ ಹೊಡೆದು ನೋವುಂಟು ಮಾಡಿ ಪ್ರಾಣ ಬೆದರಿಕೆ ಹಾಕಿದನು ಎಂದರೆ ಸರಿಯಲ್ಲ.

ಸದರಿ ವಿಚಾರವಾಗಿ ನಾನು ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗೆಳದಿದ್ದರಿಂದ ಸಾಕ್ಷಿಯು ಪೋಲೀಸರಿಗೆ ನೀಡಿದ ಹೇಳಿಕೆಯನ್ನು ನಿಪಿ 2 ಎಂದು ಗುರುತಿಸಲಾಯಿತು.

ನಿಪಿ 2 ರ ಸಂಗತಿಗಳು ಗೊತ್ತಿದ್ದರು ನಾನು ಜಮೀನಿನಲ್ಲಿ ಬಿದ್ದು ಚಿಕಿತ್ಸೆ ಪಡೆದಿದ್ದೆ ಎಂದು ಆರೋಪಿತರೊಂದಿಗೆ ರಾಜಿ ಮಾಡಿಕೊಂಡಿದ್ದಕೋಸ್ಕರ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀಸವಾಲುಃ ಶ್ರೀ.ಟಿ.ಎನ್. ಆರೋಪಿ ಪರ ವಕೀಲರಿಂದಃ- ಇಲ್ಲ.</u>**

**<u>ಮರು ವಿಚಾರಣೆ ಇಲ್ಲ.</u>**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಂತಾಮಣಿ.